## ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
## KARNATAKA LEGISLATIVE ASSEMBLY, RESEARCH AND REFERENCE BRANCH

### ಪತ್ರಿಕಾ ತುಣುಕುಗಳು
### PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 16/10/20

# ಮಾರ್ಗಸೂಚಿ ಉಲ್ಲಂಘನೆ: ಸರ್ಕಾರಕ್ಕೆ ಹೈ ನೋಟಿಸ್

16/10/20

**ಬೆಂಗಳೂರು:** ಭೂ ಸುಧಾರಣಾ ತಿದ್ದುಪಡಿ ಕಾಯ್ದೆ ಮತ್ತು ಕೃಷಿ ಮಸೂದೆ ವಿರೋಧಿಸಿ ಕಳೆದ ಸೆ.28ರಂದು ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ನಡೆದ ಪ್ರತಿಭಟನೆ ಹಾಗೂ ಮುಷ್ಕರದಲ್ಲಿ ಕೋವಿಡ್-19 ಮಾರ್ಗಸೂಚಿ ಉಲ್ಲಂಘಿಸಿದವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆಯಡಿ ಕಾನೂನು ಕ್ರಮ ಜರುಗಿಸಲು ಆದೇಶಿಸುವಂತೆ ಕೋರಿ ಸಲ್ಲಿಸಿರುವ ಅರ್ಜಿ ಸಂಬಂಧ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್ ಜಾರಿ ಮಾಡಿದೆ.



ಈ ಕುರಿತ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾ. ಎ.ಎಸ್. ಓಕ್ ಅವರ ನೇತೃತ್ವದ ವಿಭಾಗೀಯ ನ್ಯಾಯ ಪೀಠದ ಮುಂದೆ ಗುರುವಾರ ವಿಚಾರಣೆಗೆ ಬಂದಿತ್ತು. ಕೆಲ ಕಾಲ ಅರ್ಜಿದಾರರ ವಾದ ಆಲಿಸಿದ ನ್ಯಾಯಪೀಠ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಪೊಲೀಸ್ ಮಹಾ ನಿರ್ದೇಶಕರು, ನಗರ ಪೊಲೀಸ್ ಆಯುಕ್ತರಿಗೆ ನೋಟಿಸ್ ಜಾರಿಗೊಳಿಸಿ, ಅರ್ಜಿಗೆ ಆಕ್ಷೇಪಣೆ ಸಲ್ಲಿಸಲು ಸೂಚಿಸಿತು.

ಕೊರೊನಾ ನಿಯಂತ್ರಣ ಹಿನ್ನೆಲೆಯಲ್ಲಿ ಮಾಸ್ಕ್ ಧರಿಸುವುದು, ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು ಸೇರಿದಂತೆ ಅನೇಕ ಮಾರ್ಗಸೂಚಿಗಳ ಜಾರಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರ ಆದೇಶಿಸಿದೆ. ಜತೆಗೆ, ಸಾರ್ವಜನಿಕ ಸಾಂಸ್ಕೃತಿಕ, ಧಾರ್ಮಿಕ ಮತ್ತು ರಾಜಕೀಯ ಸಭೆ ಸಮಾರಂಭ ನಡೆಸಲು ಮತ್ತು ಜನರು ಗುಂಪು ಸೇರುವುದಕ್ಕೆ ನಿರ್ಬಂಧ ವಿಧಿಸಲಾಗಿದೆ. ಆದರೆ, ಭೂ ಸುಧಾರಣಾ ತಿದ್ದುಪಡಿ ಕಾಯ್ದೆ ಮತ್ತು ಕೃಷಿ ಮಸೂದೆ ವಿರೋಧಿಸಿ ಕಳೆದ ಸೆ.28ರಂದು ರಾಜ್ಯಾದ್ಯಂತ ರಾಜಕೀಯ ಪಕ್ಷಗಳು, ಕನ್ನಡ ಹಾಗೂ ರೈತ ಪರ ಸಂಘಟನೆಗಳು ಬಂದ್ ಆಚರಿಸಿವೆ. ಪ್ರತಿಭಟನೆಯಲ್ಲಿ ಪಾಲ್ಗೊಂಡವರು ಮಾರ್ಗಸೂಚಿ ಅನುಸರಿಸಿಲ್ಲ ಎಂದು ಅರ್ಜಿಯಲ್ಲಿ ತಿಳಿಸಲಾಗಿದೆ.